ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

URL.www.anekal-pa.in, web5.kar.nic.in/e-vinyasa

## ವಸತಿ ಉದ್ದೇಶಕ್ಕಾಗಿ
## ಕರಡು ಅನುಮೋದನಾ ಪತ್ರ
## (ವಿನ್ಯಾಸ ಅಭಿವೃದ್ಧಿಪಡಿಸಲು ಮಾತ್ರ)

**ಸಂಖ್ಯೆ:** ಆಯೋಪ್ರಾ/ಎಲ್‌ಎಓ/51/2018-19 **ದಿನಾಂಕ:** 22 JUL 2019

**ವಿಷಯ:** ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಅತ್ತಿಬೆಲೆ ಹೋಬಳಿ, ಗುಡ್ಡಹಟ್ಟಿ ಗ್ರಾಮದ ಸ.ನಂ.69ರಲ್ಲಿನ 03ಎಕರೆ 09ಗುಂಟೆ, ಸ.ನಂ.70/1ರಲ್ಲಿನ 01ಎಕರೆ 16ಗುಂಟೆ, ಸ.ನಂ.70/2ರಲ್ಲಿನ 01ಕರೆ 04ಗುಂಟೆ, ಸ.ನಂ.74/3ರಲ್ಲಿನ 0-30ಗುಂಟೆ, ಸ.ನಂ.74/4ರಲ್ಲಿನ 0-21ಗುಂಟೆ ಮತ್ತು ಸ.ನಂ.74/7ರಲ್ಲಿನ 01ಎಕರೆ 16ಗುಂಟೆ ಒಟ್ಟು 08ಎಕರೆ 16ಗುಂಟೆ ವಿಸ್ತೀರ್ಣದ ಜಮೀನಿನಲ್ಲಿ **ಕರಡು ವಸತಿ ವಿನ್ಯಾಸ** ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ.

**ಉಲ್ಲೇಖ:**
1. ಮೆ:ಬೆಸ್ಟ್ ಪ್ರಾಪರ್ಟೀಸ್ ಅಂಡ್ ಡೆವಲಪರ್ಸ್ ಪರವಾಗಿ ಪಾಲುದಾರರು ಶ್ರೀ ಎಲ್.ಸುಬ್ಬಯ್ಯನಾಯ್ಡು ಇವರ ಮನವಿ ದಿನಾಂಕ:23.11.2018.
2. ದಿನಾಂಕ:03.06.2019ರಂದು ನಡೆದ ಪ್ರಾಧಿಕಾರದ 66ನೇ ಸಭೆಯ ವಿಷಯ ಸಂಖ್ಯೆ:17ರ ನಿರ್ಣಯ.
3. ಪ್ರಾಧಿಕಾರಕ್ಕೆ ಹಣ ಪಾವತಿಸಿದ ಬಗ್ಗೆ ರೂ.6,88,800/-ಗಳ ರಶೀದಿ ಸಂಖ್ಯೆ:1782661 ದಿನಾಂಕ:06.07.2019 ಮತ್ತು ಕೆರೆಸಂರಕ್ಷಣಾ ಶುಲ್ಕ ರೂ.8,50,000/-ಗಳ ರಶೀದಿ ಸಂಖ್ಯೆ:997932 ದಿನಾಂಕ:06.07.2019.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ನೆರಳೂರು ಗ್ರಾಮ ಪಂಚಾಯಿತಿ ಕಾರ್ಯಾಲಯ, ಇವರ ಪತ್ರ ಸಂಖ್ಯೆ:ನೆ.ಗ್ರಾ.ಪಂ./41/2019-20 ದಿನಾಂಕ:18.07.2019.
5. ಸರ್ಜಾಪುರ ಉಪನೊಂದಣಾಧಿಕಾರಿಗಳ ಪತ್ರ ಸಂಖ್ಯೆ:ABL-1-02544-2019-20 ದಿನಾಂಕ:15.07.2019.

*************

ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಅತ್ತಿಬೆಲೆ ಹೋಬಳಿ, ಗುಡ್ಡಹಟ್ಟಿ ಗ್ರಾಮದ ಸ.ನಂ.69ರಲ್ಲಿನ 03ಎಕರೆ 09ಗುಂಟೆ, ಸ.ನಂ.70/1ರಲ್ಲಿನ 01ಎಕರೆ 16ಗುಂಟೆ, ಸ.ನಂ.70/2ರಲ್ಲಿನ 01ಕರೆ 04ಗುಂಟೆ, ಸ.ನಂ.74/3ರಲ್ಲಿನ 0-30ಗುಂಟೆ, ಸ.ನಂ.74/4ರಲ್ಲಿನ 0-21ಗುಂಟೆ ಮತ್ತು ಸ.ನಂ.74/7ರಲ್ಲಿನ 01ಎಕರೆ 16ಗುಂಟೆ ಒಟ್ಟು 08ಎಕರೆ 16ಗುಂಟೆ ಜಮೀನಿಗೆ ವಸತಿ ವಿನ್ಯಾಸ ನಕ್ಷೆ ಅನುಮೋದನೆಯನ್ನು ಉಲ್ಲೇಖ(1)ರಂತೆ ಕೋರಿರುತ್ತಾರೆ. ಉಲ್ಲೇಖ(2)ರ ಪ್ರಾಧಿಕಾರದ ಸಭೆಯಲ್ಲಿ ವಿನ್ಯಾಸ ನಕ್ಷೆ ಅನುಮೋದನೆ ನೀಡಲು ತೀರ್ಮಾನಿಸಲಾಗಿರುತ್ತದೆ. ಹಾಗೂ ಉಲ್ಲೇಖ(3)ರಂತೆ ಶುಲ್ಕ ಪಾವತಿಸಿರುತ್ತಾರೆ. ಉಲ್ಲೇಖ(4)ರಂತೆ ಉದ್ಯಾನವನ ಹಾಗೂ ರಸ್ತೆಗಾಗಿ ಕಾಯ್ದಿರಿಸಿದ ಪ್ರದೇಶವನ್ನು ಪಂಚಾಯಿತಿ ಅಭಿವೃದ್ಧಿ

ಅಧಿಕಾರಿಗಳು, ನೆರಳೂರು ಗ್ರಾಮ ಪಂಚಾಯಿತಿ ಕಾರ್ಯಾಲಯ, ಅತ್ತಿಬೆಲೆ ಹೋಬಳಿ, ಆನೇಕಲ್ ಇವರಿಗೆ ಹಾಗೂ ಸಾರ್ವಜನಿಕ ಸೌಲಭ್ಯಕ್ಕಾಗಿ ಕಾಯ್ದಿರಿಸಿದ ಪ್ರದೇಶವನ್ನು ಉಲ್ಲೇಖ(5)ರಂತೆ ಈ ಪ್ರಾಧಿಕಾರಕ್ಕೆ ನೊಂದಾಯಿತ ಪರಿತ್ಯಾಜನ ಪತ್ರದ ಮುಖಾಂತರ ಹಸ್ತಾಂತರಿಸಿರುತ್ತಾರೆ. ಆದ್ದರಿಂದ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17 (2)ರ ದಿನಾಂಕ:10.09.2015ರ ತಿದ್ದುಪಡಿಯಂತೆ, ವಸತಿ ಬಡಾವಣೆಯನ್ನು ಅಭಿವೃದ್ಧಿಪಡಿಸಲು ಮಾತ್ರ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ತಾತ್ಕಾಲಿಕ ಅನುಮೋದನೆ ನೀಡಲಾಗಿದೆ. **ಕರಡು ವಸತಿ ಬಡಾವಣೆಯಲ್ಲಿ ಬರುವ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿ ನಂತರ ಸಂಬಂಧಿಸಿದ ಇಲಾಖೆಗಳಿಂದ ನಿರಾಕ್ಷೇಪಣಾ ಪತ್ರಗಳನ್ನು ಪಡೆದು ಈ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿದಲ್ಲಿ ವಸತಿ ವಿನ್ಯಾಸ ನಕ್ಷೆಗೆ ವಲಯ ನಿಯಮಾವಳಿಯಂತೆ ಅನುಮೋದನೆ ನೀಡಿ ನಿವೇಶನಗಳನ್ನು ನೊಂದಣಿಗಾಗಿ ಬಿಡುಗಡೆ ಮಾಡಲಾಗುವುದು.**

| ಕ್ರ.ಸಂ. | **ಷರತ್ತುಗಳು** |
|---|---|
| 1. | ಕರಡು ಅನುಮೋದನೆ ನೀಡಿದ ದಿನಾಂಕದಿಂದ ಎರಡು ವರ್ಷದೊಳಗೆ ವಿನ್ಯಾಸವನ್ನು ಸಂಪೂರ್ಣವಾಗಿ ಅಭಿವೃದ್ಧಿಗೊಳಿಸತಕ್ಕದ್ದು, ತಪ್ಪಿದ್ದಲ್ಲಿ ತಾತ್ಕಾಲಿಕ ಅನುಮೋದನೆಯನ್ನು ನವೀಕರಿಸಿಕೊಳ್ಳತಕ್ಕದು. |
| 2. | ಅಂತಿಮ ಹಂತದ ಅಂದರೆ ಶೇ.100ರಷ್ಟು ನಿವೇಶನಗಳನ್ನು ಬಿಡುಗಡೆಗೊಳಿಸುವ ಪೂರ್ವದಲ್ಲಿ ವಿನ್ಯಾಸದಲ್ಲಿ ಎಲ್ಲಾ ಸಿವಿಲ್ ಕಾಮಗಾರಿಗಳಾದ ರಸ್ತೆ, ಚರಂಡಿ, ಒಳಚರಂಡಿ, ನೀರಿನ ಸಂಪರ್ಕ ಹಾಗೂ ಇತರೆ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಲೋಕೋಪಯೋಗಿ ಒಳನಾಡು ಬಂದರು ಮತ್ತು ಜಲಸಾರಿಗೆ ಇಲಾಖೆಯಿಂದ ಮತ್ತು ಸ್ಥಳೀಯ ಸಂಸ್ಥೆಯಿಂದ ಧೃಡೀಕರಣ ಪತ್ರ ಪಡೆದು ಸಲ್ಲಿಸತಕ್ಕದ್ದು. |
| 3. | ವಸತಿ ವಿನ್ಯಾಸದಲ್ಲಿ ಕಾಯ್ದಿರಿಸಿರುವ ಉದ್ಯಾನವನ ಪ್ರದೇಶಕ್ಕೆ Fencing ಅಳವಡಿಸಿ ಉದ್ಯಾನವನವನ್ನು ಅಭಿವೃದ್ಧಿಪಡಿಸಿ ತೋಟಗಾರಿಕೆ ಇಲಾಖೆಯಿಂದ ಧೃಡೀಕರಣ ಪತ್ರ ಪಡೆದು ಸಲ್ಲಿಸತಕ್ಕದ್ದು. |
| 4. | ಪ್ರಸ್ತಾವಿತ ವಿನ್ಯಾಸದಲ್ಲಿ ಸೂಕ್ತವಾದ ಕಡೆ ಪ್ರಮಾಣೀಕೃತ ರೀತಿಯ ಒಳಚರಂಡಿ ವ್ಯವಸ್ಥೆ ಹಾಗೂ ಶುದ್ಧೀಕರಣ ಘಟಕ (STP)ವನ್ನು ವಿನ್ಯಾಸದಲ್ಲಿ ನಿರ್ಮಾಣ ಮಾಡತಕ್ಕದ್ದು. |
| 5. | ಈ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು. |
| 6. | ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡೂ ಕಡೆ ಹಾಗೂ ಉದ್ಯಾನವನಗಳಲ್ಲಿ ಹೊಸ ಸಸಿಗಳನ್ನು ಬೆಳೆಸುವುದು. |

7. ಕರಡು ಅನುಮೋದಿತ ವಿನ್ಯಾಸದ ಸೂಕ್ತ ಸ್ಥಳಗಳಲ್ಲಿ Storm Water Pits(SEP) ಮತ್ತು (RP)ಗಳನ್ನು ನಿರ್ಮಿಸಿ ವಿನ್ಯಾಸದಲ್ಲಿ ಮಳೆನೀರು ಸಂಗ್ರಹಣೆ (Rain Water Pits) ಪದ್ಧತಿಯನ್ನು ಕಡ್ಡಾಯವಾಗಿ ಅಳವಡಿಸಿ ಅಂತರ್ ಜಲವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

8. ಕರಡು ಅನುಮೋದಿತ ವಿನ್ಯಾಸದಲ್ಲಿರುವ ರಸ್ತೆಗಳು, ಉದ್ಯಾನವನವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಈ ಪ್ರಾಧಿಕಾರದಿಂದ ತಿಳಿಸುವವರೆಗೆ ನಿರ್ವಹಣೆಯನ್ನು ಮಾಡತಕ್ಕದ್ದು ಹಾಗೂ ಸಾರ್ವಜನಿಕ ಸೌಲಭ್ಯಕ್ಕೆ ಕಾಯ್ದಿರಿಸಿದ ನಿವೇಶನವನ್ನು ಒತ್ತುವರಿಯಾಗದಂತೆ ಸಂರಕ್ಷಿಸತಕ್ಕದ್ದು.

9. ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಇಲಾಖೆಗಳು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು.

10. ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ-ಪಕ್ಕದ ಜಮೀನುಗಳಿಗೆ ಇರುವ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.

11. ಈ ಅನುಮೋದನೆಯು ತಾಂತ್ರಿಕವಾಗಿರುವುದರಿಂದ ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸಲು ಬರುವುದಿಲ್ಲ.

12. ಕರಡು ವಸತಿ ಬಡಾವಣೆಯಲ್ಲಿ ವಿಕಲಚೇತನರಿಗೆ ಸುಲಭವಾಗಿ ಸಂಚರಿಸಲು ಅನುಕೂಲವಾಗುವಂತೆ ಪಾದಚಾರಿ ಮಾರ್ಗವನ್ನು ಹಾಗೂ ರಸ್ತೆಗಳನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು.

13. ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ ಮುಂತಾದವುಗಳಿಗೆ ವಿನ್ಯಾಸದ ಯಾವುದೇ ಮಲಿನ ನೀರನ್ನು ಬಿಡಬಾರದು.

14. ಈ ಅನುಮೋದಿತ ಕರಡು ವಸತಿ ವಿನ್ಯಾಸ ನಕ್ಷೆ ಪ್ರದೇಶದಲ್ಲಿ ಬರುವ 'ಬಿ' ಖರಾಬು ಜಮೀನುಗಳು ಸರ್ಕಾರಕ್ಕೆ ಸೇರಿರುತ್ತದೆ. ಈ ಜಮೀನುಗಳನ್ನು ಯಥಾಸ್ಥಿತಿಯಂತೆ ಕಾಪಾಡತಕ್ಕದ್ದು ಹಾಗೂ ಅತಿಕ್ರಮಣ ಮಾಡಬಾರದು ಮತ್ತು ಇತರೆ ಉದ್ದೇಶಗಳಿಗಾಗಿ ಉಪಯೋಗಿಸತಕ್ಕದ್ದಲ್ಲ.

15. **ಸದರಿ ಕರಡು ವಸತಿ ವಿನ್ಯಾಸದ ಸುತ್ತಲೂ ಕಾಂಪೌಂಡ್ ನಿರ್ಮಿಸಿ ಗೇಟ್‌ಅನ್ನು ಅಳವಡಿಸಿ ಗೇಟೇಡ್ ಕಮ್ಯೂನಿಟಿ ಎಂಬ ಹೆಸರಿನಲ್ಲಿ ನಿವೇಶನಗಳನ್ನು ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ ಹಾಗೂ ಸದರಿ ವಿನ್ಯಾಸದಲ್ಲಿನ ರಸ್ತೆ, ಪಾದಾಚಾರಿ ಮಾರ್ಗ ಹಾಗೂ ಉದ್ಯಾನವನಗಳು ಸಾರ್ವಜನಿಕ ಸ್ವತ್ತಾಗಿರುತ್ತದೆ. ಆದ್ದರಿಂದ ಸಾರ್ವಜನಿಕ ಸ್ವತ್ತುಗಳನ್ನು ಸಾರ್ವಜನಿಕರಿಗೆ ಮುಕ್ತವಾಗಿಡತಕ್ಕದ್ದು.**

16. ಕರಡು ಅನುಮೋದಿತ ವಿನ್ಯಾಸದಲ್ಲಿ ಬರುವ 18.00ಮೀ. ಗಿಂತ ಹೆಚ್ಚಿನ ಅಗಲದ ರಸ್ತೆಗಳ ಅಕ್ಕ-ಪಕ್ಕದಲ್ಲಿ ಪಾದಚಾರಿ ಮತ್ತು ಸೈಕಲ್ ಟ್ರಾಕ್‌ನ್ನು ಅಳವಡಿಸಿಕೊಳ್ಳತಕ್ಕದ್ದು.

17. ವಿನ್ಯಾಸ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಅನುಮೋದನೆಯು ಯಾವ ಪೂರ್ವ ಸೂಚನೆಯೂ ಇಲ್ಲದೇ ತಂತಾನೆ ರದ್ದಾಗುತ್ತದೆ.

18. ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ವಿಧಿ ಕಲಂ 17(4) ರಂತೆ ಕ್ರಮ ಜರುಗಿಸಲಾಗುವುದು.

19. ಪ್ರಸ್ತಾವಿತ ವಿನ್ಯಾಸದಲ್ಲಿ ಸೂಕ್ತವಾದ ಕಡೆ ಪ್ರಾಮಾಣೀಕೃತ ರೀತಿಯಲ್ಲಿ ಸೀವೇಜ್ ಟ್ರೀಟ್‌ಮೆಂಟ್ ಪ್ಲಾಂಟ್‌ಅನ್ನು ಸ್ಥಾಪಿಸಬೇಕು ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಷರತ್ತುಗಳನ್ನು ತಪ್ಪದೇ ಅನುಸರಿಸತಕ್ಕದ್ದು.

20. ಕರಡು ವಸತಿ ಬಡಾವಣೆಯ ಮುಖ್ಯ ದ್ವಾರಗಳಲ್ಲಿ ನೀರು ರಸ್ತೆಗೆ ಹರಿದು ಬರದಂತೆ ಚರಂಡಿ ನಿರ್ಮಿಸಿ ಅದರ ಮೇಲೆ ಸೂಕ್ತ ವ್ಯವಸ್ಥೆ (COWCATCHERS)ಗಳನ್ನು ಅಳವಡಿಸುವಂತೆ ಮತ್ತು ಬಡಾವಣೆಯ ದ್ವಾರದಿಂದ ರಸ್ತೆಯ ಅಂಚಿನವರೆಗೆ ರಸ್ತೆಯನ್ನು ಎತ್ತರಿಸದಂತೆ ಸೂಚಿಸಲಾಗಿದೆ.

21. ಸದರಿ ಜಮೀನಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.

22. ವಿನ್ಯಾಸ ಅಭಿವೃದ್ಧಿಪಡಿಸುವ ಪ್ರದೇಶದಲ್ಲಿ ಪ್ರಕಟಣಾ ಫಲಕ ಅಳವಡಿಸಿ ಅದರಲ್ಲಿ ಕರಡು ವಿನ್ಯಾಸ ನಕ್ಷೆ ಹಾಗೂ ಅನುಮೋದನೆ ಸಂಖ್ಯೆ ಮತ್ತು ದಿನಾಂಕವನ್ನು ಪ್ರಕಟಿಸತಕ್ಕದ್ದು.

23. ರೇರಾ ಪ್ರಾಧಿಕಾರದಿಂದ ನಿಯಮಾನುಸಾರ ನೋಂದಣಿ ಮಾಡಿಸಿಕೊಳ್ಳತಕ್ಕದ್ದು.

ಸದಸ್ಯ-ಕಾರ್ಯದರ್ಶಿ ಹಾಗೂ ನಗರ ಮತ್ತು
**ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು(ಪ್ರ),**
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್.

**<u>ಪ್ರತಿಯನ್ನು ಮಾಹಿತಿಗಾಗಿ:</u>**

1. ಮೆ:ಬೆಸ್ಟ್ ಪ್ರಾಪರ್ಟೀಸ್ ಅಂಡ್ ಡೆವಲಪರ್ಸ್ ಪರವಾಗಿ ಪಾಲುದಾರರು ಶ್ರೀ ಎಲ್.ಸುಬ್ಬಯ್ಯ ನಾಯ್ಡು, ನಂ.114, ಸಿ.ಎಂ.ಆರ್. ಕಾಂಪ್ಲೆಕ್ಸ್, ಕಾರ್ಪೋರೇಷನ್ ಬ್ಯಾಂಕ್ ಮೇಲೆ, ಚಂದಾಪುರ, ಬೆಂಗಳೂರು-560 099.

2. **ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು,** ನೆರಳೂರು ಗ್ರಾಮ ಪಂಚಾಯಿತಿ ಕಾರ್ಯಾಲಯ, ನೆರಳೂರು ಗ್ರಾಮ, ಅತ್ತಿಬೆಲೆ ಹೋಬಳಿ, ಆನೇಕಲ್ ತಾಲ್ಲೂಕು, ಬೆಂಗಳೂರು-562 107.
3. **ಮಾನ್ಯ ಕಾರ್ಯದರ್ಶಿಗಳು,** ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ಕಾರ್ಪೋರೇಟ್ ಆಫೀಸ್, 1/14, 2ನೇ ಫ್ಲೋರ್, ಸಿಲ್ವರ್‌ಜೂಬ್ಲಿ ಬ್ಲಾಕ್, ಸಿಎಸ್‌ಐ ಕಾಂಪೌಂಡ್, ಮಿಷನ್‌ರೋಡ್, ಯುನಿಟಿಬಿಲ್ಡಿಂಗ್, ಸಂಪಂಗಿರಾಮನಗರ, ಬೆಂಗಳೂರು-560 027.
4. **ಕಛೇರಿ ಪ್ರತಿ.**